ನಿರ್ವಹಣೆ ಇವೇ ಮೊದಲಾದ ಕ್ರಮಗಳನ್ನು ಕೈಗೊಳ್ಳಲು ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ.

4) ಗ್ರಾಮಪಂಚಾಯತಿ/ತಾಲ್ಲೂಕು ಪಂಚಾಯತಿ ಹಾಗೂ ಸ್ಥಳೀಯ ಸಂಸ್ಥೆಗಳ ಸದಸ್ಯರುಗಳನ್ನು ಸಂಪರ್ಕಿಸಿ ಇಲಾಖೆಯು ಕೈಗೊಂಡ ಕ್ರಮಗಳು ಸದಸ್ಯರು ಕೈಗೊಳ್ಳಬೇಕಾದ ಚಟುವಟಿಕೆಗಳ ಬಗ್ಗೆ ಸೂಕ್ತ ಮಾಹಿತಿ ನೀಡಿ ರೋಗ ತಡೆಗಟ್ಟಲು ಹಾಗೂ ನಿಯಂತ್ರಿಸಲು ಅವರ ಸಂಪೂರ್ಣ ಸಹಕಾರ ಪಡೆಯುವಂತೆ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿಗೆ ಸೂಚನೆಗಳನ್ನು ನೀಡಲಾಗಿದೆ.

5) ಜ್ವರದ ಉಲ್ಬಣತೆಗೆ ಕಾರಣವನ್ನು ಪತ್ತೆ ಮಾಡಲು ಜಿಲ್ಲಾ ಪ್ರಯೋಗ ಶಾಲಾ ತಂತ್ರಜ್ಞರು ಜಿಲ್ಲಾ ಕೀಟ ಶಾಸ್ತ್ರಜ್ಞರು ಮತ್ತು ಎಲ್ಲಾ ಸರ್ವೇಕ್ಷಣಾ ಅಧಿಕಾರಿಗಳ ತಂಡವನ್ನು ರಚಿಸಿದ್ದು ತ್ವರಿತವಾಗಿ ಸ್ಥಳ ಸಮೀಕ್ಷೆಗಾಗಿ ನಿಯೋಜಿಸಿ ತುರ್ತಾಗಿ ರೋಗವಾಹಕಗಳ ಸೂಕ್ತ ನಿಯಂತ್ರಣಾ ಕ್ರಮಗಳನ್ನು ಕೈಗೊಳ್ಳುವುದೇ ಅಲ್ಲದೇ ಕೀಟನಾಶಕ ಧೂಮೀಕರಣ, ಕೀಟನಾಶಕ ಸಿಂಪಡಣಡ, ಲಾರ್ವಾಹಾರಿ ಮೀನುಗಳ ಬಿಡುಗಡೆ ಮುಂತಾದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

6) ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಇತರ ಇಲಾಖಾ ಅಧಿಕಾರಿಗಳ ಸಮನ್ವಯ ಸಮಿತಿಯನ್ನು ಕ್ರಮವಾಗಿ ಜಿಲ್ಲಾಧಿಕಾರಿಗಳ ಹಾಗೂ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ರಚಿಸಿ ಸಭೆಗಳನ್ನು ಕರೆದು ಪರಿಸ್ಥಿತಿಯ ಪರಿವೀಕ್ಷಣೆ, ಅಧ್ಯಯನ ಹಾಗೂ ಕಾರ್ಯತಂತ್ರ ರೂಪುರೇಷೆಗಳನ್ನು ಯೋಚಿಸಿ ಅನುಷ್ಠಾನಗೊಳಿಸಲಾಗುತ್ತಿದೆ.

7) ರೋಗದ ಮುನ್ನೆಚರಿಕೆ ಕ್ರಮಗಳ ಬಗ್ಗೆ ಅರಿವು ಮೂಡಿಸಲು ಪ್ರತಿದಿನ ಆಕಾಶವಾಣಿಯಲ್ಲಿ ಪ್ರಚಾರ ಮಾಡುತ್ತಿದ್ದು ದಿನಪತ್ರಿಕೆಗಳಲ್ಲಿ ಜಾಹೀರಾತು ಮತ್ತು ಭಿತ್ತಿಪತ್ರ/ಕರಪತ್ರಗಳ ಮೂಲಕ ಆರೋಗ್ಯ ಶಿಕ್ಷಣ ನೀಡಲಾಗುತ್ತಿದೆ.

1311(690) ಶ್ರೀ ಕ್ಯಾತ್ಸಂದ್ರ ಎನ್. ರಾಜಣ್ಣ (ಬೆಳ್ಳಾವಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಗ್ರಾಮೀಣ ಪ್ರದೇಶದಲ್ಲಿ ಮಹಿಳಾ ವೈದ್ಯರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ
ಮಂಜೂರಾಗಿರುವ ಮಹಿಳಾ ವೈದ್ಯರ ಹುದ್ದೆಗಳು – 352

ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ವೈದ್ಯರು – 265
ಖಾಲಿ ಇರುವ ಮಹಿಳಾ ವೈದ್ಯರ ಹುದ್ದೆಗಳು – 87

ಆ) ಜಿಲ್ಲಾ ಮಟ್ಟದಲ್ಲಿ ಗುತ್ತಿಗೆ ಆಧಾರದ ಮೇಲೆ ವೈದ್ಯರನ್ನು ನೇಮಿಸಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ ಹಾಗೂ ಈ ಕೊರತೆಯನ್ನು ನೀಗಿಸಲು ವಿಶೇಷ ನೇಮಕಾತಿ ನಿಯಮಗಳ ಅಂತಿಮ ಅಧಿಸೂಚನೆಯ ನಂತರ ರಾಜ್ಯದಲ್ಲಿ ಖಾಲಿ ಇರುವ 500 ವೈದ್ಯರ ಹುದ್ದೆಗಳನ್ನು ಎರಡು ಹಂತದಲ್ಲಿ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಗ್ರಾಮೀಣ ಪ್ರದೇಶದಲ್ಲಿ ಕರ್ತವ್ಯ ನಿರ್ವಹಿಸಲು ಗುತ್ತಿಗೆ ಮಹಿಳಾ ವೈದ್ಯರುಗಳು ಮುಂದೆ ಬರುತ್ತಿಲ್ಲ. ಆದರೆ ನೇಮಕಾತಿ ಮಾಡಿಕೊಳ್ಳುವಾಗ ಸರ್ಕಾರಿ ಆದೇಶದ ಪ್ರಕಾರ ಮಹಿಳಾ ಮೀಸಲಾತಿಯಂತೆ ಶೇಕಡಾ 30% ರಷ್ಟು ಮಹಿಳಾ ವೈದ್ಯರನ್ನು ಖಾಲಿ ಇರುವ ಹುದ್ದೆಗಳಿಗೆ ಭರ್ತಿ ಮಾಡಲಾಗುವುದು.

1312(692) ಶ್ರೀ ಕ್ಯಾತಸಂದ್ರ ಎನ್ ರಾಜಣ್ಣ (ಬೆಳ್ಳಾವಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕೇಂದ್ರ ಸರ್ಕಾರ ಯೋಜನೆಯನ್ವಯ ರಾಜ್ಯ ಸರ್ಕಾರಕ್ಕೆ ಕಳೆದ 3 ವರ್ಷಗಳಲ್ಲಿ ಬರಬೇಕಾದ ಅನುದಾನ ಬಂದಿದೆಯೇ:

ಆ) ಹಾಗಿದ್ದಲ್ಲಿ ಅದಕ್ಕೆ ಕಾರಣಗಳೇನು (ಈ ಬಗ್ಗೆ ವಿವರ ನೀಡುವುದು)?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) :

ಅ) **ಸಮಾಜ ಕಲ್ಯಾಣ ಇಲಾಖೆ:**

ಕಳೆದ 3 ವರ್ಷಗಳಲ್ಲಿ ಬಿಡುಗಡೆಯಾದ ಅನುದಾನದ ಸಂಪೂರ್ಣ ವಿವರಗಳನ್ನು ಅನುಬಂಧದಲ್ಲಿ ವಿವರಿಸಿದೆ.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ:

ಕಳೆದ 3 ವರ್ಷಗಳಲ್ಲಿ ಕೇಂದ್ರ ಯೋಜನೆಯನ್ವಯ ರಾಜ್ಯ ಸರ್ಕಾರಕ್ಕೆ ಬಂದ ಅನುದಾನದ ವಿವರ ಈ ಕೆಳಗಿನಂತಿದೆ.